# Bangalore
# Regional News
# 11.03.2026 / 18.40 hrs
# ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ರಾಜ್ಯದಿಂದ 5.5 ಲಕ್ಷ ಕೋಟಿ ರೂಪಾಯಿ ಐಟಿ ಉತ್ಪನ್ನ ರಫ್ತು – ಸದನಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ
2. ಕೋಲಿ, ಬೆಸ್ತ, ಕಬ್ಬಲಿಗ ಸೇರಿದಂತೆ ಹಲವು ಜಾತಿಗಳನ್ನು ಪರಿಶಿಷ್ಟ ವರ್ಗಕ್ಕೆ ಸೇರಿಸುವಂತೆ ಕೇಂದ್ರಕ್ಕೆ ಶಿಫಾರಸ್ಸು ಕಳುಹಿಸಲು ಸರ್ಕಾರ ನಿರ್ಧಾರ
3. ಬೆಂಗಳೂರು – ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಅಪಘಾತ ತಗ್ಗಿಸಲು ಕ್ರಮ – ಪರಿಷತ್‌ನಲ್ಲಿ ಸಚಿವ ಜಾರಕಿಹೊಳಿ ಸ್ಪಷ್ಟನೆ
4. ಹುಬ್ಬಳ್ಳಿ ಇಲ್ಲವೇ ಬೆಳಗಾವಿಯಲ್ಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಘೋಷಿಸುವಂತೆ ಕೇಂದ್ರಕ್ಕೆ ಸಚಿವ ಎಂ.ಬಿ. ಪಾಟೀಲ್ ಆಗ್ರಹ
5. ರಾಜ್ಯದ ಹಲವೆಡೆ ಗರ್ಭಕಂಠ ಕ್ಯಾನ್ಸರ್ ತಡೆ ಲಸಿಕಾ ಅಭಿಯಾನ ಆರಂಭ

***************

2025-26 ನೇ ಸಾಲಿನಲ್ಲಿ ರಾಜ್ಯದಿಂದ 5.5 ಲಕ್ಷ ಕೋಟಿ ರೂಪಾಯಿ ಐಟಿ ಉತ್ಪನ್ನ ರಫ್ತು ಮಾಡಲಾಗಿದೆ ಎಂದು ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.
ವಿಧಾನಸಭೆಯಲ್ಲಿಂದು ಬಿಜೆಪಿಯ ವೇದವ್ಯಾಸ ಕಾಮತ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವ ಪ್ರಿಯಾಂಕ್ ಖರ್ಗೆ 2024-25 ರಲ್ಲಿ 5.4 ಲಕ್ಷ ಕೋಟಿ ರೂಪಾಯಿ, 2023-24 ರಲ್ಲಿ 4.09 ಲಕ್ಷ ಕೋಟಿ ರೂಪಾಯಿ, 2022-23 ರಲ್ಲಿ 3.55 ಕೋಟಿ ರೂಪಾಯಿ ಐಟಿ ಉತ್ಪನ್ನಗಳನ್ನು ರಾಜ್ಯದಿಂದ ರಫ್ತು ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.
ರಾಜ್ಯದ ಒಟ್ಟು ಜಿಡಿಪಿಯಲ್ಲಿ ಬೆಂಗಳೂರಿನ ಕೊಡುಗೆ ಶೇಕಡಾ 40ರಷ್ಟಿದ್ದು, ಮಂಗಳೂರು ಶೇಕಡ 3.5 ಹಾಗೂ ಮೈಸೂರಿನ ಕೊಡುಗೆ ಶೇಕಡಾ 3 ರಷ್ಟಿದೆ. ಮಂಗಳೂರು ನಗರದ ವಾತಾವರಣ ಸುಧಾರಣೆಯಾದರೆ ಅಲ್ಲಿ ಐಟಿ ಉದ್ಯಮ ಬೆಳವಣಿಗೆಗೆ ವಿಫುಲ ಅವಕಾಶವಿದೆ ಎಂದು ತಿಳಿಸಿದ್ದಾರೆ.
ದೊಡ್ಡಬಳ್ಳಾಪುರ ಕ್ಷೇತ್ರದ ಶಾಸಕ ಧೀರಜ್ ಮುನಿರಾಜು ಅವರ ಪ್ರತ್ಯೇಕ ಪ್ರಶ್ನೆಗೆ ಉತ್ತರಿಸಿದ ಸಚಿವ ಪ್ರಿಯಾಂಕ್ ಖರ್ಗೆ ರಾಜ್ಯದಲ್ಲಿ ಖಾಸಗಿ ಕ್ಷೇತ್ರದ 32 ಡೇಟಾ ಸೆಂಟರ್ ಗಳಿದ್ದು ಮಂಗಳೂರಿನಲ್ಲಿ ಡೇಟಾ ಸೆಂಟರ್ ಆರಂಭಿಸಲು ರಾಜ್ಯ ಸರ್ಕಾರ ಉತ್ತೇಜನ ನೀಡಲಿದೆ ಎಂದು ಹೇಳಿದ್ದಾರೆ.
ಸ್ಟಾರ್ಟ್‌ಅಪ್ ವಿದೇಶ ನೇರ ಬಂಡವಾಳ ಹೂಡಿಕೆ ಹಾಗೂ ಎಮರ್ಜಿಂಗ್ ಟೆಕ್ನಾಲಜೀಸ್‌ನಲ್ಲಿ ಬೆಂಗಳೂರು ನಂಬರ್ ಒನ್ ಸ್ಥಾನದಲ್ಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಪ್ರಗತಿ ಪಥ ಯೋಜನೆಯಡಿ ಮುಂದಿನ ಐದು ವರ್ಷದಲ್ಲಿ ರಾಜ್ಯದ ಗ್ರಾಮೀಣ ಪ್ರದೇಶದ 7 ಸಾವಿರದ 110 ಕಿಲೋ ಮೀಟರ್ ಗ್ರಾಮೀಣ ರಸ್ತೆ ಅಭಿವೃದ್ಧಿಪಡಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಆಯವ್ಯಯದಲ್ಲಿ ಈ ಯೋಜನೆಗೆ 100 ಕೋಟಿ ರೂಪಾಯಿ ಮೀಸಲಿಡಲಾಗಿದೆ ಎಂದು ಹೇಳಿದ್ದಾರೆ.
ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಅರಸೀಕೆರೆ ಶಾಸಕ ಶಿವಲಿಂಗೇಗೌಡ.ಕೆ.ಎಂ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಪ್ರಗತಿ ಪಥ ಯೋಜನೆಯಡಿ ಕೈಗೆತ್ತಿಕೊಳ್ಳಲು ಒಂದು ಸಾವಿರದ 353 ರಸ್ತೆಗಳನ್ನು ಗುರುತಿಸಲಾಗಿದ್ದು, ಈ ಪೈಕಿ 293 ರಸ್ತೆಗಳು ಜೈವಿಕ ಸೂಕ್ಷ್ಮ ವಲಯ ಹಾಗೂ ಸಂರಕ್ಷಿತ ಅರಣ್ಯಗಳ ಮೂಲಕ ಹಾದು ಹೋಗುವ ಕಾರಣಗಳಿಂದ ಹೆಚ್ಚುವರಿ ಪರಿಶೀಲನೆ ಅಗತ್ಯವಿದೆ ಎಂದು ಉತ್ತರಿಸಿದ್ದಾರೆ.
ಮೊದಲ ಹಂತದಲ್ಲಿ 573 ರಸ್ತೆಗಳ ಕಾಮಗಾರಿ ಹಾಗೂ ಎರಡನೇ ಹಂತದಲ್ಲಿ 426 ರಸ್ತೆಗಳ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

***************

ಕೋಲಿ, ಬೆಸ್ತ, ಕಬ್ಬಲಿಗ, ಅಂಬಿಗಣ ಬಾರ್ಕಿ ಜಾತಿ ಸೇರಿದಂತೆ ಹಲವು ಜಾತಿಗಳನ್ನು ಪರಿಶಿಷ್ಟ ವರ್ಗಕ್ಕೆ ಸೇರಿಸಲು ಕೇಂದ್ರಕ್ಕೆ ಶಿಫಾರಸ್ಸು ಕಳುಹಿಸುವುದಾಗಿ ಸಚಿವ ಬೋಸರಾಜು ತಿಳಿಸಿದ್ದಾರೆ.

ವಿಧಾನಪರಿಷತ್‌ನಲ್ಲಿ ಗಮನಸೆಳೆಯುವ ಪ್ರಸ್ತಾಪದಲ್ಲಿ ಕಾಂಗ್ರೆಸ್‌ನ ತಿಪ್ಪಣ್ಣಪ್ಪ ಕಮಕನೂರು, ಬಿಜೆಪಿ ಸದಸ್ಯ ತಳವಾರ ಸಾಬಣ್ಣ ವಿಷಯ ಪ್ರಸ್ತಾಪಿಸಿ, ಈ ಸಮುದಾಯಗಳನ್ನು ಪರಿಶಿಷ್ಟ ವರ್ಗಕ್ಕೆ ಸೇರಿಸುವಂತೆ ಮನವಿ ಮಾಡಿದರು. ಮುಖ್ಯಮಂತ್ರಿ ಪರವಾಗಿ ಸಭಾನಾಯಕ ಬೋಸರಾಜು ಉತ್ತರ ನೀಡಿ, ಈ ಸಮುದಾಯಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಕನ್ನಡ ವಿಶ್ವವಿದ್ಯಾಲಯ ಹಂಪಿ ಮೂಲಕ ಕುಲಶಾಸ್ತ್ರೀಯ ಅಧ್ಯಯನ ಕೈಗೊಂಡು, ವರದಿ ಪಡೆದು ಸಲ್ಲಿಸಲು ಆದೇಶಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

***************

ಸರ್ಕಾರ, ಶಾಲಾ ಆವರಣದಲ್ಲಿ ನಾಯಿಗಳನ್ನು ನಿಯಂತ್ರಿಸುವ ಅವೈಜ್ಞಾನಿಕ ಹಾಗೂ ಹಾಸ್ಯಾಸ್ಪದವಾದ ಆದೇಶವನ್ನು ಹೊರಡಿಸಿರುವುದು ಖಂಡನಾರ್ಹ ಎಂದು ಪರಿಷತ್‌ನಲ್ಲಿ ಬಿಜೆಪಿಯ ಸದಸ್ಯ ಹಣಮಂತ ನಿರಾಣಿ ಒತ್ತಾಯಿಸಿದ್ದಾರೆ. ಕೂಡಲೇ ಈ ಆದೇಶವನ್ನು ವಾಪಾಸ್ಸು ಪಡೆಯಬೇಕು ಎಂದು ಆಗ್ರಹಿಸಿದ್ದಾರೆ.

ನಾಯಿಗಳನ್ನು ನಿಯಂತ್ರಿಸುವುದು ಶಿಕ್ಷಕರ ಕೆಲಸವಲ್ಲ, ಈ ಕಾರ್ಯ ನಿರ್ವಹಣೆ ವೇಳೆ ನಾಯಿಗಳು ದಾಳಿ ಮಾಡಿ ಶಿಕ್ಷಕರಿಗೆ ಅಪಾಯವಾದರೆ ಯಾರು ಹೊಣೆ ಎಂದು ನಿರಾಣಿ ಪ್ರಶ್ನಿಸಿದ್ದಾರೆ.

***************

ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿ ಯೋಜನೆಯ ರಸ್ತೆಗಳಲ್ಲಿ ಉಂಟಾಗುತ್ತಿರುವ ಅಪಘಾತಗಳನ್ನು ತಗ್ಗಿಸಲು ಹಾಗೂ ವೇಗದ ಮಿತಿಯನ್ನು ನಿಗಾವಹಿಸಲು ಕ್ರಮ ಕೈಗೊಳ್ಳಲಾಗಿದೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಮೇಲ್ಮನೆಯಲ್ಲಿ ತಿಳಿಸಿದ್ದಾರೆ.

ಪ್ರಶ್ನೋತ್ತರ ವೇಳೆಯಲ್ಲಿ ಪದವೀಧರ ಕ್ಷೇತ್ರದ ರಾಮೋಜಿಗೌಡ ಅವರ ಪ್ರಶ್ನೆಗೆ ಉತ್ತರ ನೀಡಿದ ಅವರು, ಬೆಂಗಳೂರು ಮೈಸೂರು ರಸ್ತೆಯಲ್ಲಿ ಅಳವಡಿಸಿರುವಂತೆ ನೈಸ್ ರಸ್ತೆಯಲ್ಲೂ ಎಐ ಕ್ಯಾಮರಾಗಳನ್ನು ಅಳವಡಿಸುವ ಬಗ್ಗೆ ಚಿಂತನೆ ನಡೆಸಲಾಗಿದೆ ಎಂದು ಹೇಳಿದ್ದಾರೆ.

***************

ತಮಿಳುನಾಡಿನ ಮಧುರೈ ವಿಮಾನ ನಿಲ್ದಾಣವನ್ನು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಎಂದು ಘೋಷಿಸಿರುವ ಕೇಂದ್ರ ಸರ್ಕಾರದ ವಿರುದ್ಧ ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಕರ್ನಾಟಕದ ಹುಬ್ಬಳ್ಳಿ ಮತ್ತು ಬೆಳಗಾವಿ ವಿಮಾನ ನಿಲ್ದಾಣಗಳ ವಿಷಯದಲ್ಲಿ ತೋರುತ್ತಿರುವ ತಾರತಮ್ಯ ನೀತಿಗೆ ಇದು ಸಾಕ್ಷಿಯಾಗಿದೆ ಎಂದು ಹೇಳಿದ್ದಾರೆ.

ತಮಿಳುನಾಡು ಚುನಾವಣೆಯ ದೃಷ್ಟಿಯಿಂದ ಕೇಂದ್ರ ಸರ್ಕಾರ ಈ ನಿರ್ಧಾರ ತೆಗೆದುಕೊಂಡಿದ್ದು, ರಾಜ್ಯದ ಬೇಡಿಕೆಯನ್ನು ನಿರ್ಲಕ್ಷಿಸಲಾಗಿದೆ ಎಂದು ದೂರಿದ್ದಾರೆ. ಹುಬ್ಬಳ್ಳಿ ಅಥವಾ ಬೆಳಗಾವಿಯಲ್ಲಿ ತಕ್ಷಣವೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಘೋಷಿಸಬೇಕು. ರಾಜ್ಯದ ಸಂಸದರು ಒಟ್ಟಾಗಿ ಧ್ವನಿ ಎತ್ತುವಂತೆ ಆಗ್ರಹಿಸಿದ್ದಾರೆ.

***************

ಬಳ್ಳಾರಿ ಜಿಲ್ಲೆಯಾದ್ಯಂತ ಇಂದಿನಿಂದ ಮೂರು ತಿಂಗಳ ಕಾಲ 14 ವರ್ಷದೊಳಗಿನ ಹೆಣ್ಣುಮಕ್ಕಳಿಗೆ ಗರ್ಭಕಂಠದ ಕ್ಯಾನ್ಸರ್ ಬರುವುದನ್ನು ತಡೆಯಲು, ಹೂಮನ್ ಪ್ಯಾಪಿಲೋಮ ಎಂಬ ವೈರಸ್ ಲಸಿಕೆ ನೀಡುವ ವಿಶೇಷ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ.

ಅಭಿಯಾನಕ್ಕೆ ಚಾಲನೆ ನೀಡಿದ ಮಾತನಾಡಿದ ಜಿಲ್ಲಾ ಪಂಚಾಯ್ತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಲಸಿಕೆ ಹಾಕಿಸಿಕೊಂಡಾಗ ಕೆಲವರಿಗೆ ಜ್ವರ ಬರುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಮಾತನಾಡಿ ಜಿಲ್ಲೆಯಲ್ಲಿ ಈ ಲಸಿಕೆ ಹಾಕಲು 18 ಸಾವಿರ ಮಕ್ಕಳನ್ನು ಗುರುತಿಸಲಾಗಿದೆ ಎಂದು ಹೇಳಿದ್ದಾರೆ.

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಹೆಚ್.ಪಿ.ವಿ. ಲಸಿಕಾ ಅಭಿಯಾನಕ್ಕೆ ಚಾಲನೆ ದೊರೆತಿದೆ.

ಗುಂಡ್ಲುಪೇಟೆ ತಾಲೂಕು ಆರೋಗ್ಯ ಅಧಿಕಾರಿ ಡಾ.ಅಲೀಮ್ ಪಾಷ ಮಾತನಾಡಿ, ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಲಸಿಕೆ ಲಭ್ಯವಿದ್ದು ಸಾರ್ವಜನಿಕರು, ಪೋಷಕರು, ಶಾಲಾ ಮುಖ್ಯಸ್ಥರು ಮಕ್ಕಳಿಗೆ ಈ ಲಸಿಕೆ ಹಾಕಿಸಬೇಕು ಎಂದು ಮನವಿ ಮಾಡಿದ್ದಾರೆ.

ಕೋಲಾರದ ಬಂಗಾರಪೇಟೆ ತಾಲ್ಲೂಕಿನ ದೊಡ್ಡಚಿನ್ನಹಳ್ಳಿ ಸರಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ.ಸುನಿಲ್ ಎಚ್‌ಪಿವಿ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿದರು.

***************

ಕರ್ನಾಟಕ ಅರೆಭಾಷೆ, ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿಯು 2025ನೇ ಸಾಲಿನ ಪ್ರಶಸ್ತಿಯನ್ನು ಈಗಾಗಲೇ ಘೋಷಿಸಿದೆ. ಇದೇ 14ರಂದು ಮಂಗಳೂರಿನ ಅಂಬೇಡ್ಕರ್ ಭವನದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಪ್ರಶಸ್ತಿ ನೀಡಲು ನಿರ್ಧರಿಸಲಾಗಿದೆ.

ಪ್ರಶಸ್ತಿಯು 50 ಸಾವಿರ ರೂಪಾಯಿ ನಗದು ಹಾಗೂ ಪ್ರಶಸ್ತಿ ಫಲಕವನ್ನು ಒಳಗೊಂಡಿರುತ್ತದೆ ಎಂದು ಅಕಾಡೆಮಿ ಅಧ್ಯಕ್ಷರಾದ ಸದಾನಂದ ಮಾವಜಿ ಮಡಿಕೇರಿಯಲ್ಲಿಂದು ತಿಳಿಸಿದ್ದಾರೆ.

ಸಂಶೋಧಕ ಪುತ್ತೂರು ಅನಂತರಾಜ ಗೌಡ, ಅರೆಭಾಷೆ ಸಂಘಟಕಿ ಹಾಗೂ ಸಮಾಜ ಸೇವಕಿ ಲೋಕೇಶ್ವರಿ ವಿನಯಚಂದ್ರ ಹಾಗೂ ಅರೆಭಾಷೆ ಸಾಹಿತಿ ಕಟ್ರತನ ಲಲಿತಾ ಅಯ್ಯಣ್ಣ ಇವರುಗಳು ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಅಕಾಡೆಮಿಯು ಪುಸ್ತಕ ಪ್ರಕಟಣೆಗಾಗಿ ಆಹ್ವಾನ ನೀಡಿದ್ದು, ವಿವಿಧ ಲೇಖಕರು ಸಲ್ಲಿಸಿರುವ ಪುಸ್ತಕಗಳಲ್ಲಿ ಆಯ್ದ 12 ಪುಸ್ತಕಗಳ ಬಿಡುಗಡೆಯೂ ಈ ಸಂದರ್ಭದಲ್ಲಿ ನಡೆಯಲಿದೆ.

***************

ಮಧ್ಯಪ್ರಾಚ್ಯದಲ್ಲಿ ಉಂಟಾಗಿರುವ ಯುದ್ಧದ ಬಿಕ್ಕಟ್ಟಿನಲ್ಲಿ ಕೆಲವೊಂದು ಕಡೆ ಅನಿಲ ಪೂರೈಕೆಯಲ್ಲಿ ವ್ಯತ್ಯಯವಾಗಿದ್ದು, ಮಲೆ ಮಹದೇಶ್ವರ ಬೆಟ್ಟದಲ್ಲಿ ಅನ್ನ ದಾಸೋಹಕ್ಕೆ ಯಾವುದೇ ತೊಂದರೆಯಿಲ್ಲ ಎಂದು ಮಲೆಮಹದೇಶ್ವರ ಬೆಟ್ಟ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎ.ಇ. ರಘು ತಿಳಿಸಿದ್ದಾರೆ.

ಇದೇ 16 ರಿಂದ ಯುಗಾದಿ ಜಾತ್ರಾ ಮಹೋತ್ಸವ ಆರಂಭಗೊಳ್ಳಲ್ಲಿದ್ದು ಈಗಾಗಲೇ 150 ಎಲ್ ಪಿಜಿ ಗ್ಯಾಸ್ ಸಿಲಿಂಡರ್ ದಾಸ್ತಾನು ಮಾಡಲಾಗಿದೆ, ಜಾತ್ರಾ ಮಹೋತ್ಸವಕ್ಕೆ ಹೆಚ್ಚುವರಿಯಾಗಿ ಸಿಲಿಂಡರ್ ನೀಡುವಂತೆ ವಿತರಕರಿಗೆ ತಿಳಿಸಲಾಗಿದೆ ಎಂದು ಅವರು ಹೇಳಿದ್ದಾರೆ.

***************

ಸಂಕ್ಷಿಪ್ತ ಸುದ್ದಿ

1. 2026 ಫೆಬ್ರವರಿಯಲ್ಲಿ ನನ್ಹೆ ಪರಿಷ್ಟೆ ಕಾರ್ಯಾಚರಣೆಯಲ್ಲಿ ನೈರುತ್ಯ ರೈಲ್ವೆಯ ಆರ್‌ಪಿಎಫ್ ಸಿಬ್ಬಂದಿ 12 ಬಾಲಕಿಯರು ಒಟ್ಟು 50 ಮಕ್ಕಳ ರಕ್ಷಣೆ ಮಾಡಿದೆ. ಪ್ರಯಾಣಿಕರು ಕಳೆದುಕೊಂಡ 44 ಲಕ್ಷದ 8 ಸಾವಿರ ಮೌಲ್ಯದ ವಸ್ತುಗಳನ್ನು ಪತ್ತೆಮಾಡಿ ಹಿಂತಿರುಗಿಸಲಾಗಿದೆ ಎಂದು ನೈರುತ್ಯ ರೈಲ್ವೆ ಪ್ರಕಟಣೆಯಲ್ಲಿ ತಿಳಿಸಿದೆ.
2. ಹಸಿರು ದಾವಣಗೆರೆ ಪರಿಕಲ್ಪನೆಯೊಂದಿಗೆ ನಗರದ ಎಲ್ಲ ಉದ್ಯಾವನಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದ್ದಾರೆ.
3. ಸಂಶೋಧನೆ ಮಾಡುವಾಗ ವಿದ್ಯಾರ್ಥಿಗಳು ತಮ್ಮ ಸಂಪೂರ್ಣ ಪರಿಶ್ರಮದಿಂದ ಸಂಶೋಧನೆಗಳನ್ನು ಸಿದ್ಧಪಡಿಸಬೇಕು, AI ತಂತ್ರಜ್ಞಾನದ ಮೊರೆಹೋಗುವುದನ್ನು ಕಡಿಮೆ ಮಾಡಿ ತಮ್ಮಲ್ಲಿರುವ ಜ್ಞಾನವನ್ನು ಸಂಶೋಧನೆಯಲ್ಲಿ ಬಳಸಬೇಕು ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಶರಣಪ್ಪ ಹಲಸೆ ಸಲಹೆ ನೀಡಿದ್ದಾರೆ.

*******ಮುಕ್ತಾಯ********